## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.969/2023

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಪ್ರದೀಪ | CW: 3 | PW: 2 |
| ತಂದೆಯ ಹೆಸರು | : | ಓಂಕಾರಪ್ಪ | | |
| ವಯಸ್ಸು | : | 30 | | |
| ವೃತ್ತಿ | : | ಕೂಲಿ | | |
| ವಾಸಸ್ಥಳ | : | ಸುರಹೊನ್ನೆ | | |

ದಿನಾಂಕಃ 30.10.2025 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–

ಆರೋಪಿ ಮತ್ತು ಚಾಸಾ 2 ರವರು ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿಲ್ಲ, ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿಲ್ಲ. ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ.

ಪೋಲೀಸರ ಕೋರಿಕೆಯ ಮೇರೆಗೆ 1 ದಾಖಲೆಗೆ ನಾನು ಸಹಿಯನ್ನು ಮಾಡಿರುತ್ತೇನೆ ಆದರೆ ಅದರಲ್ಲಿ ಏನು ಬರೆದಿದೆ ಎನ್ನುವ ವಿಚಾರ ನನಗೆ ಗೊತ್ತಿಲ್ಲ. ಸಾಕ್ಷಿಯು ನಿಪಿ 2 ಸ್ಥಳ ಪಂಚನಾಮೆಯಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ 2(ಬಿ) ಎಂದು ಗುರುತಿಸಲಾಯಿತು. ನ್ಯಾಯಾಲಯದ ಮುಂದಿರುವ ಮು.ಮಾ 1 ನ್ನು ನಾನು ಈ ಹಿಂದೆ ನೋಡಿಲ್ಲ. ನಾನು ಪೋಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

(ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

<u>ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-</u>

ದಿಃ 13.07.2023 ರಂದು ಆರೋಪಿಯ ಮನೆಯ ಮುಂದೆ ನನ್ನ ಮತ್ತು ಚಾಸಾ 2 ರವರ ಸಮಕ್ಷಮ ಸಂಜೆ 7 ರಿಂದ 8.15 ರ ಸಮಯದಲ್ಲಿ ನಿಪಿ 2ರ ಂತೆ ಸ್ಥಳ ಪಂಚನಾಮೆ ಜರುಗಿಸಿ , ಮು ಮಾ 1 ನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ ಸಂಬಂಧ ನಾನು ಪೋಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಒಪ್ಪದ ಹೇಳಿಕೆಯನ್ನು ನಿಪಿ 3 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲುಃ- ಆರೋಪಿ ಪರ ವಕೀಲರಿಂದಃ-</u>

ಆರೋಪಿ ಪರ ವಕೀಲರು ಪಾಟೀ ಸವಾಲು ಏನು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.